# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 571
ಸದಸ್ಯರ ಹೆಸರು : ಶ್ರೀ ಅ.ದೇವೇಗೌಡ
ಉತ್ತರಿಸುವ ದಿನಾಂಕ : 16-09-2022
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ನಗರ ಪ್ರದೇಶಗಳಲ್ಲಿ ಹೆಚ್ಚು ವಾಹನ ದಟ್ಟಣೆ ಇರುವ ಪ್ರದೇಶಗಳಲ್ಲಿ, ಸಿಗ್ನಲ್ ಇರುವ ಕಡೆ ಭಿಕ್ಷುಕರ ಹಾವಳಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ಹಾಗಿದ್ದರೆ, ಭಿಕ್ಷಾಟನೆ ನಿರ್ಮೂಲನೆ ಮತ್ತು ಪುನರ್‌ವಸತಿ ಕಾನೂನಿನ್ವಯ ಕ್ರಮ ಜರುಗಿಸಿ, ಈ ಭಿಕ್ಷುಕರ ಹಾವಳಿ ತಪ್ಪಿಸಲು ಸರ್ಕಾರ ಕ್ರಮವಹಿಸುವುದೇ? | ಕರ್ನಾಟಕ ಭಿಕ್ಷಾಟನಾ ನಿಷೇಧ ಅಧಿನಿಯಮ 1975 ರ ಸೆಕ್ಷನ್ 3 ರನ್ವಯ ರಾಜ್ಯದಲ್ಲಿ ಭಿಕ್ಷಾಟನೆಯನ್ನು ನಿಷೇಧಿಸಲಾಗಿದೆ. ಸದರಿ ಅಧಿನಿಯಮದನ್ವಯ 16 ವರ್ಷ ಮೇಲ್ಪಟ್ಟ ಪುರುಷರು ಹಾಗೂ 18 ವರ್ಷ ಮೇಲ್ಪಟ್ಟ ಮಹಿಳೆಯರು ಭಿಕ್ಷಾಟನೆಯಲ್ಲಿ ತೊಡಗಿದ್ದಲ್ಲಿ ಅಂತಹ ಭಿಕ್ಷುಕರನ್ನು ಬಂಧಿಸಿ, ನಿರಾಶ್ರಿತರ ಪರಿಹಾರ ಕೇಂದ್ರಗಳಲ್ಲಿ ರಕ್ಷಣೆ ಒದಗಿಸಲಾಗುತ್ತಿದೆ.<br><br>16 ವರ್ಷಗಳಿಗಿಂತ ಕಡಿಮೆ ವಯಸ್ಸಿನ ಗಂಡು ಮಕ್ಕಳನ್ನು ಹಾಗೂ 18 ವರ್ಷಗಳಿಗಿಂತ ಕಡಿಮೆ ವಯಸ್ಸಿನ ಹೆಣ್ಣು ಮಕ್ಕಳನ್ನು ಅಧಿನಿಯಮದಲ್ಲಿ ಬಂಧಿಸಲು ಅವಕಾಶ ಕಲ್ಪಿಸಿರುವುದಿಲ್ಲ. ಸಿಗ್ನಲ್‌ಗಳಲ್ಲಿ ಭಿಕ್ಷಾಟನೆಯಲ್ಲಿ ತೊಡಗಿರುವ ಮಕ್ಕಳು ಮತ್ತು ಮಹಿಳೆಯರು ಸಹ ಕಂಡುಬಂದಲ್ಲಿ ಅಂತಹವರನ್ನು ಬಂಧಿಸಿ, ಮಹಿಳಾ ಮತ್ತು ಮಕ್ಕಳ ರಕ್ಷಣಾ ಸಮಿತಿಯ ವಶಕ್ಕೆ ನೀಡಲಾಗುತ್ತಿದೆ.<br><br>ಸಾರ್ವಜನಿಕ ಸ್ಥಳಗಳಲ್ಲಿ ಭಿಕ್ಷೆ ಬೇಡುತ್ತಿದ್ದಲ್ಲಿ ಅಂತಹವರನ್ನು ಸಾರ್ವಜನಿಕರು ರಕ್ಷಣೆ ಮಾಡಲು ಉಚಿತ ಸಹಾಯವಾಣಿ ಸಂಖ್ಯೆ: 10581 ಹಾಗೂ ಸಮಾಜ ಕಲ್ಯಾಣ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಲ್ಯಾಣ ಮಿತ್ರ ಸಂಖ್ಯೆ: 9482300400 ಗೆ ಮಾಹಿತಿ ನೀಡಿದ್ದಲ್ಲಿ, ಭಿಕ್ಷುಕರನ್ನು ರಕ್ಷಿಸಲು ಕ್ರಮವಹಿಸಲಾಗುತ್ತಿದೆ. |

| | | |
|---|---|---|
| | | ನಗರ ಪ್ರದೇಶಗಳಲ್ಲಿ ಹೆಚ್ಚು ವಾಹನ ದಟ್ಟಣೆ ಇರುವ ಪ್ರದೇಶಗಳಲ್ಲಿ, ಸಿಗ್ನಲ್ ಇರುವ ಕಡೆ ಭಿಕ್ಷುಕರ ಹಾವಳಿ ಹೆಚ್ಚಾಗಿರುವುದನ್ನು ತಡೆಗಟ್ಟಲು/ ನಿಯಂತ್ರಿಸಲು ದಿನಾಂಕ:18.7.2022 ರಂದು ಭಿಕ್ಷಾಟನೆ ನಿಯಂತ್ರಣಕ್ಕಾಗಿ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಗೃಹ ಇಲಾಖೆ ಹಾಗೂ ಕಾರ್ಮಿಕ ಇಲಾಖೆಗಳ ಸಚಿವರು ಹಾಗೂ ಈ ಇಲಾಖೆಗಳ ಅಧಿಕಾರಿಗಳೊಂದಿಗೆ ನಡೆಸಲಾಗಿರುವ ಸಭೆಯಲ್ಲಿ, ಬೆಂಗಳೂರು ನಗರದಲ್ಲಿನ ಭಿಕ್ಷಾಟನೆ ನಿಯಂತ್ರಣಕ್ಕಾಗಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಗೃಹ ಇಲಾಖೆ, ಕಾರ್ಮಿಕರ ಇಲಾಖೆ, ಕರ್ನಾಟಕ ಕಾನೂನು ಸೇವೆಗಳ ಪ್ರಾಧಿಕಾರ, ಅಭಿಯೋಗ, ಐಸೆಕ್, ಸರ್ಕಾರಿ ವ್ಯಾಜ್ಯಗಳ ಇಲಾಖೆ ಹಾಗೂ ಬಿಬಿಎಂಪಿಯನ್ನು ಒಳಗೊಂಡಂತೆ ಟಾಸ್ಕ್ ಫೋರ್ಸ್ ತಂಡಗಳನ್ನು ರಚಿಸಿ, ನಗರದಲ್ಲಿ ಭಿಕ್ಷಾಟನೆಯ HOT SPOT ಗಳನ್ನು ಗುರುತಿಸಿ, ಎಲ್ಲಾ ಇಲಾಖೆಗಳು ಸಮನ್ವಯದೊಂದಿಗೆ ರೆಸ್ಕ್ಯೂ ಕಾರ್ಯಚರಣೆ ಮಾಡುವಂತೆ ನಿರ್ದೇಶನ ನೀಡಲಾಗಿರುತ್ತದೆ.<br><br>ಅದರಂತೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ರವರು ವಿವಿಧ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡ ಟಾಸ್ಕ್ ಫೋರ್ಸ್ ತಂಡಗಳನ್ನು ರಚಿಸಿ, ಕಾರ್ಯಾಚರಣೆ ಮೂಲಕ ಭಿಕ್ಷಾಟನೆ ತಡೆಗಟ್ಟಲು ದಿನಾಂಕ:08.8.2022 ರಂದು ವಿಡಿಯೋ ಕಾನ್ಫರೆನ್ಸ್ ಮೂಲಕ ನಡೆದ ಸಭೆಯಲ್ಲಿ ಸೂಚಿಸಿರುತ್ತಾರೆ. ಅದರಂತೆ ಸದರಿ ಕಾರ್ಯಚರಣೆಗೆ ಟಾಸ್ಕ್ ಫೋರ್ಸ್ ತಂಡಗಳನ್ನು ರಚಿಸಲು ಕ್ರಮವಹಿಸಲಾಗುತ್ತಿದ್ದು, ತಂಡ ರಚನೆಯಾದ ಕೂಡಲೇ ಎಲ್ಲಾ ಇಲಾಖೆಗಳ ಸಮನ್ವಯದೊಂದಿಗೆ ರೆಸ್ಕ್ಯೂ ಕಾರ್ಯಚರಣೆ ನಡೆಸಲು ಕ್ರಮವಹಿಸಲಾಗುವುದು.<br><br>ಮುಂದುವರೆದು, ಪ್ರಸ್ತುತ ಕೇಂದ್ರ ಪರಿಹಾರ ಸಮಿತಿಯ ಆಡಳಿತ ವ್ಯಾಪ್ತಿಯಲ್ಲಿ ಬರುವ ನಿರಾಶ್ರಿತರ ಪರಿಹಾರ ಕೇಂದ್ರಗಳು 2022-23 ನೇ ಸಾಲಿನಲ್ಲಿ ಆಗಸ್ಟ್ -2022ರ ಅಂತ್ಯದವರೆಗೆ ಭಿಕ್ಷಾಟನೆಯಲ್ಲಿ ತೊಡಗಿರುವ 1565 ಪುರುಷರು 272 ಮಹಿಳೆಯರು ಸೇರಿ ಒಟ್ಟು 1837 ಭಿಕ್ಷುಕರನ್ನು ಬಂಧಿಸಲಾಗಿದೆ. ಇವರಲ್ಲಿ ಒಟ್ಟು 15 ಉಭಯ ಲಿಂಗಿಗಳು ಹಾಗೂ 09 ಮಕ್ಕಳನ್ನೊಳಗೊಂಡ ಪ್ರಕರಣಗಳಿದ್ದು, |

| | | |
|---|---|---|
| | | ಅವರಲ್ಲಿ 06 ಪ್ರಕರಣಗಳನ್ನು ಮಕ್ಕಳ ರಕ್ಷಣಾ ಸಮಿತಿ ವಶಕ್ಕೆ ಹಾಗೂ 03 ಪ್ರಕರಣಗಳನ್ನು ಮಹಿಳಾ ಸ್ವಾಧಾರ ಕೇಂದ್ರದ ವಶಕ್ಕೆ ನೀಡಲಾಗಿದೆ. ಉಭಯ ಲಿಂಗಿಗಳಿಗೆ ಪುನಃ ಭಿಕ್ಷಾಟನೆಯಲ್ಲಿ ತೊಡಗದಂತೆ ಎಚ್ಚರಿಕೆ ನೀಡಿ, ಮುಚ್ಚಳಿಕೆ ಬರೆಸಿಕೊಂಡು ಬಿಡುಗಡೆ ಮಾಡಲಾಗಿರುತ್ತದೆ.<br><br>ಪ್ರಸ್ತುತ ಆಗಸ್ಟ್ ಅಂತ್ಯಕ್ಕೆ ಒಟ್ಟು 2674 ಪುರುಷರು ಮತ್ತು 394 ಮಹಿಳಾ ಭಿಕ್ಷುಕರುಗಳು ಸೇರಿ ಒಟ್ಟು 3068 ಭಿಕ್ಷುಕರುಗಳಿಗೆ ರಕ್ಷಣೆ ಒದಗಿಸಲಾಗಿರುತ್ತದೆ. |

ಸಕಇ 24 ಎಸ್‌ಬಿಆರ್ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.